1. ಕನಿಷ್ಠ 08 ಎಕರೆಯಿಂದ 15 ಎಕರೆವರೆಗೆ – ರೂ. 2.53 ಲಕ್ಷಗಳು ಜಮೀನು ಹೊಂದಿರುವ ಘಟಕಕ್ಕೆ (02 ಕೊಳವೆ ಬಾವಿಗಳು)
2. 15 ಎಕರೆಗಿಂತ ಹೆಚ್ಚಿನ ಜಮೀನು ಹೊಂದಿರುವ – ರೂ. 3.59 ಲಕ್ಷಗಳು ಘಟಕಕ್ಕೆ (03 ಕೊಳವೆ ಬಾವಿಗಳು)

ಇ) ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊರೆದ ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕ ದೂರವಿದ್ದಾಗ ವಿದ್ಯುತ್ ಸಂಪರ್ಕ ಕಲ್ಪಿಸಿಕೊಡಲು ವಿದ್ಯುತ್ ಕಂಬಗಳ ಗರಿಷ್ಠ ಸಂಖ್ಯೆಯನ್ನು ನಿಗದಿಪಡಿಸಿರುವುದಿಲ್ಲ.

## ನೇಸರಗಿ ಪೋಲೀಸ್ ವಸತಿ ಗೃಹಗಳು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 185 (315)
ಸದಸ್ಯರ ಹೆಸರು : ಶ್ರೀ ಮಾರಿಹಾಳ್ ಸುರೇಶ್ ಶಿವರುದ್ರಪ್ಪ (ಕಿತ್ತೂರು)
ಉತ್ತರಿಸುವ ಸಚಿವರು : ಶ್ರೀ ಆರ್. ಅಶೋಕ್ (ಗೃಹ ಮತ್ತು ಸಾರಿಗೆ ಸಚಿವರು)

**ಪ್ರಶ್ನೆಗಳು:–**

ಅ) ಕಿತ್ತೂರ ವಿಧಾನಸಭಾ ವ್ಯಾಪ್ತಿಗೆ ಬರುವ ನೇಸರಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಸತಿಗೃಹಗಳ ನಿರ್ಮಾಣಕ್ಕಾಗಿ ಅನುದಾನ ಮಂಜೂರು ಮಾಡಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ನೇಸರಗಿ ಪೊಲೀಸ್ ವಸತಿಗೃಹಗಳ ನಿರ್ಮಾಣವನ್ನು ಯಾವಾಗ ಪ್ರಾರಂಭಿಸಲಾಗುವುದು?

**ಉತ್ತರಗಳು:–**

ಅ) ಕಿತ್ತೂರು ವಿಧಾನಸಭಾ ವ್ಯಾಪ್ತಿಗೆ ಬರುವ ನೇಸರಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಸತಿಗೃಹಗಳ ನಿರ್ಮಾಣಕ್ಕಾಗಿ ಅನುದಾನ

ಮಂಜೂರು ಮಾಡಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ತ್ವರಿತ ವಸತಿ ಯೋಜನೆ–3ರಲ್ಲಿ ನೇಸರಗಿ ಪೊಲೀಸ್ ವಸತಿಗೃಹಗಳ ನಿರ್ಮಾಣ ಸೇರಿರುವುದಿಲ್ಲ. ಪ್ರಸ್ತುತ ನೇಸರಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ 32 ವಸತಿ ಗೃಹಗಳ ನಿರ್ಮಾಣಕ್ಕೆ ಕೋರಿಕೆಯಿದ್ದು, ಇದಕ್ಕಾಗಿ ಅಂದಾಜು ರೂ. 303.25 ಲಕ್ಷಗಳು ಬೇಕಾಗಿರುತ್ತದೆ. ಆದರೆ, ತ್ವರಿತ ವಸತಿ ಯೋಜನೆ–3 ಈಗಾಗಲೇ ನಿಗದಿಯಾದ ಯೋಜನೆಯಾದ್ದರಿಂದ ಸೀಮಿತ ಅನುದಾನದಲ್ಲಿ ಈ ಮೊತ್ತವನ್ನು ಭರಿಸಲು ಸಾಧ್ಯವಿರುವುದಿಲ್ಲ. ಆದ್ದರಿಂದ ಸದರಿ ಪ್ರಸ್ತಾವನೆಗೆ 2012–13ನೇ ಸಾಲಿನ ಆಯವ್ಯಯದಲ್ಲಿ ಅನುದಾನವನ್ನು ಕಲ್ಪಿಸಿಕೊಂಡು ಅನುದಾನದ ಲಭ್ಯತೆಯ ಮೇರೆಗೆ ನೇಸರಗಿ ಪೊಲೀಸ್ ವಸತಿ ಗೃಹ ನಿರ್ಮಾಣವನ್ನು ಪ್ರಾರಂಭಿಸಲಾಗುವುದು.

## ಟ್ರಾನ್ಸ್‌ಫಾರ್ಮರ್‌ಗಳು ಹಾಗೂ ವಿದ್ಯುತ್ ಸಂಪರ್ಕ ಕಲ್ಪಿಸುವುದು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 186 (157)
ಸದಸ್ಯರ ಹೆಸರು : ಶ್ರೀ ಮುನಿಯಪ್ಪ ವಿ. (ಶಿಡ್ಲಘಟ್ಟ)
ಉತ್ತರಿಸುವ ಸಚಿವರು : ಕುಮಾರಿ ಶೋಭಾ ಕರಂದ್ಲಾಜೆ (ಇಂಧನ ಸಚಿವರು)

**ಪ್ರಶ್ನೆಗಳು:–**

ಅ) ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಿದ್ಯುತ್ ಕೊರತೆಯ ಕಾರಣದಿಂದ ಹೆಚ್ಚುವರಿಯಾಗಿ ಟ್ರಾನ್ಸ್‌ಫಾರ್ಮರ್‌ಗಳು ಅಳವಡಿಸಲು ಎಷ್ಟು ಅರ್ಜಿಗಳು ಬಂದಿವೆ?

ಆ) ಎಷ್ಟು ಅರ್ಜಿಗಳಿಗೆ ಟ್ರಾನ್ಸ್‌ಫಾರ್ಮರ್‌ಗಳು ವಿತರಣೆ ಮಾಡಿದ್ದೀರಿ? ಇನ್ನು ಎಷ್ಟು ಬಾಕಿ ಇವೆ, ವಿತರಣೆ ನೀಡಲು ಇನ್ನು ಎಷ್ಟು ಕಾಲಾವಕಾಶ ಬೇಕು?

ಇ) ಸುಟ್ಟ ಟ್ರಾನ್ಸ್‌ಫಾರ್ಮರ್‌ಗಳ ಬದಲಾವಣೆಗೆ ಬಂದಿರುವ